**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ್ (ಆರ್.ಜಿ.ಎಸ್.ಎ) ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಕಾರ್ಯಕಾರಿ ಸಮಿತಿಯನ್ನು ರಚಿಸುವ ಕುರಿತು.

**ಓದಲಾಗಿದೆ:**

ಭಾರತ ಸರ್ಕಾರದ ವಿಶೇಷ ಕಾರ್ಯದರ್ಶಿಗಳ ಅರೆ ಸರ್ಕಾರಿ ಪತ್ರ ಸಂಖ್ಯೆ:ಎಂ–11015/95/2018–ಸಿಬಿ, ದಿನಾಂಕ:18–07–2018.

**ಪ್ರಸ್ತಾವನೆ:**

ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ್ (ಆರ್.ಜಿ.ಎಸ್.ಎ) ಯೋಜನೆಯ ಮಾರ್ಗಸೂಚಿಗಳ ಪ್ರಕಾರ ಸಿದ್ಧಪಡಿಸಲಾದ ಸಾಮರ್ಥ್ಯಾಭಿವೃದ್ಧಿ ಚಟುವಟಿಕೆಯ ಕ್ರಿಯಾಯೋಜನೆಯನ್ನು ಅನುಮೋದಿಸುವುದು, "ನಮ್ಮ ಗ್ರಾಮ ನಮ್ಮ ಯೋಜನೆ"ಯನ್ವಯ ಗ್ರಾಮ ಪಂಚಾಯತಿಗಳ ಬೇಡಿಕೆಗಳನ್ನು ಗಣನೆಗೆ ತೆಗೆದುಕೊಳ್ಳುವುದು, ಸಂವಿಧಾನದ 11ನೇ ಪರಿಚ್ಛೇಧದಲ್ಲಿ ಬರುವ 29 ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆಗಳನ್ನು ತಯಾರಿಸುವುದು ಹಾಗೂ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವುದು, 115 ಮಹತ್ವಕಾಂಕ್ಷೆ ಜಿಲ್ಲೆಗಳಲ್ಲಿ ಹಾಗೂ ಮಿಷನ್ ಅಂತ್ಯೋದಯದ ಉದ್ದೇಶವನ್ನು ಈಡೇರಿಸಲು ನಿಯೋಗವು ಒಳಗೊಂಡಿರುವ ಪಂಚಾಯತಿಗಳಲ್ಲಿ ಅಗತ್ಯವಾಗಿ ಬೇಕಾಗಿರುವ ಯೋಜನೆಗಳನ್ನು ವ್ಯವಸ್ಥಿತವಾಗಿ ಜೋಡಿಸುವುದು. ಈ ರೀತಿಯ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೊಳಿಸುವಂತೆ ಮೇಲೆ ಓದಲಾದ ಅರೆ ಸರ್ಕಾರಿ ಪತ್ರದಲ್ಲಿ ಪ್ರಸ್ತಾಪಿಸಲಾಗಿರುತ್ತದೆ. ಈ ಮರು ರಚಿತ ಯೋಜನೆಯನ್ನು ಸೂಕ್ತವಾಗಿ ಜಾರಿಗೊಳಿಸಲು ರಾಜ್ಯ ಮಟ್ಟದಲ್ಲಿ ರಾಜ್ಯ ಕಾರ್ಯಕಾರಿ ಸಮಿತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅಧ್ಯಕ್ಷತೆಯಲ್ಲಿ ನಿರ್ಧರಿಸಲಾಗಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 138 ಜಿಪಸ 2017, ಬೆಂಗಳೂರು, ದಿನಾಂಕ:06–08–2018**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ (ಆರ್.ಜಿ.ಎಸ್.ಎ) ಯೋಜನೆಯ ಮಾರ್ಗಸೂಚಿಗಳ ಪ್ರಕಾರ ಸಿದ್ಧಪಡಿಸಲಾದ ಸಾಮರ್ಥ್ಯಾಭಿವೃದ್ಧಿ ಚಟುವಟಿಕೆಯ ಕ್ರಿಯಾಯೋಜನೆಯನ್ನು ಅನುಮೋದಿಸಲು ಈ ಕೆಳಕಂಡವರುಗಳನ್ನು ಒಳಗೊಂಡಂತೆ ರಾಜ್ಯ ಕಾರ್ಯಕಾರಿ ಸಮಿತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದೆ.

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ. | ಸದಸ್ಯರು |
| 3. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ. | ಸದಸ್ಯರು |
| 4. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 5. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ. | ಸದಸ್ಯರು |
| 6. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ. | ಸದಸ್ಯರು |
| 7. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಠ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ. | ಸದಸ್ಯರು |
| 8. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | ಸದಸ್ಯರು |
| 9. | ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಸದಸ್ಯರು |
| 10. | ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ | ಸದಸ್ಯರು |
| 11. | ನಿರ್ದೇಶಕರು(ಪಂ.ರಾಜ್–1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಸದಸ್ಯರು |

| | | |
|---|---|---|
| 12. | ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು. | ಸದಸ್ಯರು |
| 13. | ನಿರ್ದೇಶಕರು(ಪಂ.ರಾಜ್–2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಸದಸ್ಯ ಕಾರ್ಯದರ್ಶಿ |
| 14. | ಅಧ್ಯಕ್ಷರ ಅನುಮೋದನೆ ಮೇರೆಗೆ ಇಬ್ಬರು ವಿಶೇಷ ಆಹ್ವಾನಿತರು. | |

ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ (ಆರ್.ಜಿ.ಎಸ್.ಎ) ಯೋಜನೆಯ ಅನುದಾನದ ಹಂಚಿಕೆಯ ಕುರಿತು ರಾಜ್ಯ ಕಾರ್ಯಕಾರಿ ಸಮಿತಿಯ ಅನುಮೋದನೆಯ ನಂತರ ಇತ್ಯರ್ಥಗೊಳಿಸುವುದು ಹಾಗೂ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ವಿಧಿ–ವಿಧಾನಗಳನ್ನು ಅನುಸರಿಬೇಕಾಗಿರುತ್ತದೆ.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 02 ಟಿಎಫ್‌ಪಿ 2018, ದಿನಾಂಕ:03–04–2018ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
4. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಗಳು.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆಯವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆಯವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿ.
7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಸಹಾಯಕರು.
8. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ.
9. ಸರ್ಕಾರದ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ ಹಾಗೂ ಸಂವಹನ ಇಲಾಖೆಯವರ ಆಪ್ತ ಕಾರ್ಯದರ್ಶಿ.
10. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ.
11. ಸರ್ಕಾರದ ಕಾರ್ಯದರ್ಶಿ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯವರ ಆಪ್ತ ಕಾರ್ಯದರ್ಶಿ.
12. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆಯವರ ಆಪ್ತ ಕಾರ್ಯದರ್ಶಿ.
13. ಭಾರತ ಸರ್ಕಾರದ ಪಂ.ರಾಜ್ ಸಚಿವಾಲಯದ ಪ್ರತಿನಿಧಿ, ನವದೆಹಲಿ.
14. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆರವರ ಆಪ್ತ ಕಾರ್ಯದರ್ಶಿ, ಮೈಸೂರು.
15. ನಿರ್ದೇಶಕರು(ಪಂ.ರಾಜ್–1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಸಹಾಯಕರು.
16. ಸಂಪಾದಕರು, ಕರ್ನಾಟಕ ವಿಕಾಸ/ಹೆಚ್ಚುವರಿ ಪ್ರತಿ/ವೆಬ್ ಸೈಟ್, ಗ್ರಾಅಪ ಇಲಾಖೆ.